# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**:- 7ನೇ ರಾಜ್ಯ ವೇತನ ಆಯೋಗದ ಪರಿಶೀಲನಾರ್ಹ ಅಂಶಗಳಿಗೆ ಸೇರ್ಪಡೆ ಮಾಡುವ ಕುರಿತು.

**ಓದಲಾಗಿದೆ:** 1) ದಿನಾಂಕ:19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022

2) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ ಇವರ ಪತ್ರ ಸಂಖ್ಯೆ: ಪಿ.ಎಸ್.ಸಿ 173 ಇಎಸ್‌ಟಿ/2022-23/1487 ದಿನಾಂಕ 23-01-2023.

3) ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ ಸಚಿವಾಲಯ ಇವರ ಅ.ಸ.ಪತ್ರ ಸಂಖ್ಯೆ:ಕವಿಸಸ/ಆ-1/19/ವೇಆಮಾ/2023 (ಭಾಗ ಕಡತ) ದಿನಾಂಕ 28-02-2023.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ದಿನಾಂಕ:19-11-2022ರ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರ, (ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿ ಹೊಂದಿರುವವರನ್ನು ಹೊರತುಪಡಿಸಿ) ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು / ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳ ವೇತನ ಶ್ರೇಣಿಗಳನ್ನು ಮತ್ತು ಭತ್ಯೆಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು ರೂಪಿಸಲು 7ನೇ ರಾಜ್ಯ ವೇತನ ಆಯೋಗವನ್ನು ರಚಿಸಲಾಗಿದೆ.

7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಹೊರಡಿಸಿರುವ ದಿನಾಂಕ 19-11-2022ರ ಆದೇಶದಲ್ಲಿ ಸಾಂವಿಧಾನಿಕ ಸಂಸ್ಥೆಯಾದ ಕರ್ನಾಟಕ ಲೋಕಸೇವಾ ಆಯೋಗ ಮತ್ತು ಕರ್ನಾಟಕ ವಿಧಾನಸಭೆಯ ಸಚಿವಾಲಯಗಳನ್ನು ವೇತನ ಆಯೋಗದ ಪರಿಶೀಲನಾರ್ಹ ಅಂಶಗಳ ವ್ಯಾಪ್ತಿಗೆ ಒಳಪಡಿಸುವಂತೆ ಮೇಲೆ (2) & (3)ರಲ್ಲಿ ಓದಲಾದ ಪತ್ರಗಳಲ್ಲಿ ಸರ್ಕಾರವನ್ನು ಕೋರಲಾಗಿರುತ್ತದೆ.

ಆದುದರಿಂದ, ಭಾರತ ಸಂವಿಧಾನ ಮತ್ತು ಕೇಂದ್ರ / ರಾಜ್ಯ ಅಧಿನಿಯಮದಡಿ ರಚಿತವಾದ ಹಾಗೂ ವಿಶೇಷ ಸ್ಥಾನಮಾನ ಹೊಂದಿರುವ ಈ ಕೆಳಗಿನ ಸ್ವಾಯತ್ತ ಸಂಸ್ಥೆಗಳ ಸಿಬ್ಬಂದಿಗಳ ವೇತನ ಶ್ರೇಣಿ ಮತ್ತು ಭತ್ಯೆಗಳನ್ನು ಪರಿಷ್ಕರಿಸುವುದನ್ನು ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ವರದಿ ಸಲ್ಲಿಸಲು, ಪ್ರಸ್ತುತ ರಚಿತವಾಗಿರುವ 7ನೇ ರಾಜ್ಯ ವೇತನ ಆಯೋಗದ ಪರಿಶೀಲನಾರ್ಹ ಅಂಶಗಳ ವ್ಯಾಪ್ತಿಗೆ ತರುವುದು ಅಗತ್ಯವೆಂದು ಪರಿಗಣಿಸಲಾಗಿದೆ:

1. ಕರ್ನಾಟಕ ರಾಜ್ಯಪಾಲರ ಸಚಿವಾಲಯ
2. ಕರ್ನಾಟಕ ವಿಧಾನ ಮಂಡಲ
3. ಕರ್ನಾಟಕ ಲೋಕಸೇವಾ ಆಯೋಗ
4. ಕರ್ನಾಟಕ ಆಡಳಿತ ನ್ಯಾಯ ಮಂಡಳಿ
5. ಕರ್ನಾಟಕ ಲೋಕಾಯುಕ್ತ

**ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022,**

**ಬೆಂಗಳೂರು, ದಿನಾಂಕ 08ನೇ ಮಾರ್ಚ್ 2023.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ, ಭಾರತ ಸಂವಿಧಾನ ಮತ್ತು ಕೇಂದ್ರ / ರಾಜ್ಯ ಅಧಿನಿಯಮದಡಿ ರಚಿತವಾಗಿರುವ ಹಾಗೂ ವಿಶೇಷ ಸ್ಥಾನಮಾನ ಹೊಂದಿರುವ ಈ ಕೆಳಗೆ ಸೂಚಿಸಿರುವ ಸಂಸ್ಥೆಗಳ ಸಿಬ್ಬಂದಿಗಳ ವೇತನ ಶ್ರೇಣಿ ಪರಿಷ್ಕರಣೆ ಮತ್ತು ನೂತನ ವೇತನ ರಚನೆ ಇತ್ಯಾದಿಗಳನ್ನು 7ನೇ ರಾಜ್ಯ ವೇತನ ಆಯೋಗದ ಪರಿಶೀಲನಾರ್ಹ ಅಂಶಗಳ ವ್ಯಾಪ್ತಿಯಡಿ ತರಲಾಗಿದೆ.

1. ಕರ್ನಾಟಕ ರಾಜ್ಯಪಾಲರ ಸಚಿವಾಲಯ
2. ಕರ್ನಾಟಕ ವಿಧಾನ ಮಂಡಲ
3. ಕರ್ನಾಟಕ ಲೋಕಸೇವಾ ಆಯೋಗ
4. ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ
5. ಕರ್ನಾಟಕ ಲೋಕಾಯುಕ್ತ

ವೇತನ ಪರಿಷ್ಕರಣೆ ಸಂಬಂಧ ಮೇಲ್ಕಂಡ ಸ್ವಾಯತ್ತ ಸಂಸ್ಥೆಗಳು / ಸಂಸ್ಥೆಗಳ ನೌಕರರ ಸಂಘಗಳು ಸಲ್ಲಿಸುವ ಬೇಡಿಕೆಗಳನ್ನು 7ನೇ ರಾಜ್ಯ ವೇತನ ಆಯೋಗವು ಪರಿಶೀಲಿಸಿ ಕಾರ್ಯಸಾಧ್ಯವಿರುವ ಸೂಕ್ತ ಶಿಫಾರಸ್ಸು ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Jayashree M

(ಜಯಶ್ರೀ ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2).

8/3

ಇವರಿಗೆ:

1. ವಿಶೇಷ ಕಾರ್ಯದರ್ಶಿ, ಕರ್ನಾಟಕ ರಾಜ್ಯಪಾಲರ ಸಚಿವಾಲಯ
2. ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
7. ಅಧ್ಯಕ್ಷರು / ಸದಸ್ಯರು, 7ನೇ ರಾಜ್ಯ ವೇತನ ಆಯೋಗ, ಬೆಂಗಳೂರು
8. ಕಾರ್ಯದರ್ಶಿ, 7ನೇ ರಾಜ್ಯ ವೇತನ ಆಯೋಗ, ಬೆಂಗಳೂರು
9. ಕಾರ್ಯದರ್ಶಿ, ವಿಧಾನ ಸಭೆ / ವಿಧಾನ ಪರಿಷತ್ತು, ಬೆಂಗಳೂರು
10. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ
13. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು
14. ವಾರ ಪತ್ರ / ಶಾಖಾ ರಕ್ಷಕ ಕಡತ

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ w.w.w.finance.karnataka.gov.in ವೀಕ್ಷಿಸಿ.**